# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **15** |
| ಸದಸ್ಯರ ಹೆಸರು | : | ಶ್ರೀ ಸಿ.ಟಿ. ರವಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 15-07-2024 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರ ಲಕ್ಯ ಹೋಬಳಿಯ ವ್ಯಾಪ್ತಿಯಲ್ಲಿ ತೀವ್ರ ವಿದ್ಯುತ್ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಲಕ್ಯಾ ಹೋಬಳಿಗೆ ಒಳಪಡುವ ಗ್ರಾಮಗಳಿಗೆ, 66/11 ಕೆ.ವಿ ಚಿಕ್ಕಮಗಳೂರು ವಿದ್ಯುತ್ ಉಪ ಕೇಂದ್ರದಿಂದ ಹೊರಹೊಮ್ಮುವ 11 ಕೆ.ವಿ ಲಕ್ಯಾ ಫೀಡರ್ ನಿಂದ ವಿದ್ಯುತ್ ಸರಬರಾಜು ಪೂರೈಸಲಾಗುತ್ತಿದ್ದು, ಹಾಲಿ 66/11 ಕೆ.ವಿ ಚಿಕ್ಕಮಗಳೂರು ವಿದ್ಯುತ್ ಉಪ ಕೇಂದ್ರವು ಅಧಿಕ ಒತ್ತಡ (over load) ಆಗಿರುವ ಕಾರಣ ಸದರಿ ಪ್ರದೇಶದಲ್ಲಿನ ಗ್ರಾಹಕರಿಗೆ ಗುಣಮಟ್ಟದ ವಿದ್ಯುತ್ ಪೂರೈಸಲು ಗಾಣದಾಳು ಗ್ರಾಮದಲ್ಲಿ ನೂತನವಾಗಿ 2x12.5 ಎಂ.ವಿ.ಎ 66/11 ಕೆವಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ದಿನಾಂಕ 29-8-2022 ರಂದು ನಡೆದ ಕವಿಪ್ರನಿನಿಯ 89ನೇ ತಾಂತ್ರಿಕ ಸಮನ್ವಯ ಸಮಿತಿ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ. ಸದರಿ ವಿದ್ಯುತ್ ಉಪಕೇಂದ್ರ ಸ್ಥಾಪಿಸುವ ಕಾಮಗಾರಿಯ ವಿಸ್ತೃತ ಯೋಜನಾ ವರದಿಯು ದಿನಾಂಕ 19.12.2022ರಂದು ಮಂಜೂರಾಗಿರುತ್ತದೆ. |
| ಆ) | ವಿದ್ಯುತ್ ಸಮಸ್ಯೆಯನ್ನು ಪರಿಹರಿಸಲು ಗಾಣದಾಳು ಗ್ರಾಮದಲ್ಲಿ ಎಂ.ಯು.ಎಸ್.ಎಸ್. ಸ್ಟೇಷನ್ ಸ್ಥಾಪಿಸಲು ಮಂಜೂರಾತಿ ದೊರೆತಿದ್ದು ಯಾವಾಗ; | |
| ಇ) | ಈ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆಯೇ; ಪೂರ್ಣಗೊಂಡಿದ್ದರೆ, ಯಾವಾಗ ಪೂರ್ಣಗೊಂಡಿದೆ; ಕಾಮಗಾರಿ ಪ್ರಾರಂಭವಾಗದೇ ಇರಲು ಕಾರಣಗಳೇನು; | ಸದರಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ದಿನಾಂಕ: 27.10.2023 ರಂದು ಪೂರ್ಣ ಗುತ್ತಿಗೆ ಆಧಾರದಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಎಲ್.ಓ.ಐ ನೀಡಲಾಗಿದೆ ಮತ್ತು ಪ್ರಸ್ತುತ ಕಾಮಗಾರಿ ಪ್ರಗತಿಯಲ್ಲಿದೆ. |
| ಈ) | ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು; ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು? (ವಿವರ ಒದಗಿಸಿ) | ಸದರಿ ಕಾಮಗಾರಿಯು ಪ್ರಗತಿಯಲ್ಲಿದ್ದು, ಟೆಂಡರ್ ನಿಬಂಧನೆಗಳನುಸಾರ LOI ದಿನಾಂಕದಿಂದ ಒಂದು ವರ್ಷದೊಳಗೆ, ಅಂದರೆ ದಿನಾಂಕ: 26.10.2024 ರೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕಾಗಿರುತ್ತದೆ. |

ಸಂಖ್ಯೆ: ಎನರ್ಜಿ 165 ಇಬಿಎಸ್ 2024

(ಕೆ.ಜೆ.ಜಾರ್ಜ್)
ಇಂಧನ ಸಚಿವರು